ಮೈಸೂರ್ ಡಿಸ್ಟ್ರಿಕ್ಟ್.
ಫಾರೆಸ್ಟ್ ಇಲಾಖೆ.
ನೋಟಿಫಿಕೇಷ್ಯನ್.
ತಾರೀಖು 3ನೇ ಡಿಸೆಂಬರ್ 1896.

ಇದರಿಂದ ತಿಳಿಯಪಡಿಸುವದೇನಂದರೆ,—1878ನೇ ಇಸವಿ ಫಾರೆಸ್ಟ್ ರೂಲ್ಸ್ 13ನೇ ಸೆಕ್ಷನ್ ಅನುಸರಿಸಿ, ಮೈಸೂರ್ ಡಿಸ್ಟ್ರಿಕ್ಟ್‌ನಲ್ಲಿರುವ ಇದರಡಿ ನಮೂದಿಸಲ್ಪಟ್ಟ ಬೆಂಕಿಯಿಂದ ತಡೆದ ಗವರ್ನಮೆಂಟ್ ಫಾರೆಸ್ಟ್ ವ ಪ್ಲಾಂಟೇಷ್ಯನ್‌ಗಳು ಷಿಕಾರಿ ಮತ್ತು ಇತರ ಬ್ಯಾಟೆಗಳಿಗೆ 1897ನೇ ಇಸವಿ ಮೇ ಆಕ್ಟೋಬರ್ ವರಿಗೆ ಬಂದ್ ಮಾಡಲ್ಪಟ್ಟಿರುತ್ತದೆ. ಯಾವ ಮನುಷ್ಯ ಯಾ ಮನುಷ್ಯರಾಗಲಿ ಸದರೀ ಫಾರೆಸ್ಟ್ ವ ಪ್ಲಾಂಟೇಷ್ಯನ್‌ಗಳಲ್ಲಿ ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರವರ ಲಿಖಿತಮೂಲಕವಾದ ಹುಕುಂ ಪಡೆಯದೆ ಪ್ರವೇಶ ಮಾಡಕೂಡದು.

ತಾಲ್ಲೂಕು.	ಫಾರೆಸ್ಟ್ ವ ಪ್ಲಾಂಟೇಷ್ಯನ್‌ಗಳ ಹೆಸರು.
ಹುಣಸೂರು ತಾಲ್ಲೂಕು	ವೀರನಹೊಸಹಳ್ಳಿ ಫಾರೆಸ್ಟ್
	ನಾಯಿಹಳ್ಳ ಸಂದಲ್ ಪ್ಲಾಂಟೇಷ್ಯನ್
	ಗುರುಪುರ ಡಿಟೋ
	ಪಂಜೆವಳ್ಳಿ ಡಿಟೋ
	ದೊಡ್ಡಹರವೆರಿ ಪ್ರೊಡಕ್ಟಿವ್ ಬ್ಲಾಕ್
	ಆನೇಚೌಕೂರು ಡಿಟೋ
	ವೀರನಹೊಸಹಳ್ಳಿ ಡಿಟೋ
ಹೆಗ್ಗಡದೇವನಕೋಟೆ ತಾಲ್ಲೂಕು	ಮೇಟಿಕುಪ್ಪೆ ಫಾರೆಸ್ಟ್
	ಕಾಕನಕೋಟೆ ಡಿಟೋ
	ಬೇಗೂರು ಡಿಟೋ
	ಐನೂರು ಮೂರೇಗುಡಿ ಡಿಟೋ
	ಕಾಕನಕೋಟೆ ಪ್ಲಾಂಟೇಷ್ಯನ್
	ಮಾಸ್ತಿಗುಡಿ ಡಿಟೋ
	ಮಂಚಗವ್ವಡನಹಳ್ಳಿ ಡಿಟೋ
	ಹಂಪಾಪುರ ಡಿಟೋ
ಗುಂಡ್ಲು ತಾಲ್ಲೂಕು	ಬೇರಂಬಾಡಿ ಫಾರೆಸ್ಟ್
	ಭಂಡಿಪುರ ಡಿಟೋ
	ಮದ್ದೂರು ಅಳಲೇ ಪ್ಲಾಂಟೇಷ್ಯನ್
	ಹೊಂಗಹಳ್ಳಿ ಸಂದಲ್ ಪ್ಲಾಂಟೇಷ್ಯನ್
ಚಾಮರಾಜನಗರದ ತಾಲ್ಲೂಕು	ಚಾಮರಾಜನಗರದ ಫಾರೆಸ್ಟ್

ಟಿ. ಅಬ್ದುಲ್‌ಕರೀಂ,
ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರ್.

ಕಡೂರು ಡಿಸ್ಟ್ರಿಕ್ಟ್.

ಕೊಪ್ಪ ತಾಲ್ಲೂಕು.
ಇಸ್ತಿಹಾರ್‌ನಾಮಾ.
19ನೇ ನವೆಂಬರ್ ಸ್ಯ 1896.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಕೊಪ್ಪ ತಾಲ್ಲೂಕು ಎಲೆಮೆಲಕಳ್ಳು ಅಡಿಗೆ ಖೈತ್ ಗ್ರಾಮದಲ್ಲಿ ಇರುವ ಇದರಡಿ ನಮೂದ್ಮಾಡಿರುವ ಜಮೀನಿಗೆ ಕಾಫೀ ಸಾಗುವಳಿ ಬಗ್ಗ್ಯಾಗಿ ದರಖಾಸ್ತು ಬಂದಿರೋಣವರಿಂದ ಸ್ಯ 1897ನೇ ಇಸವಿ ಜನವರಿ ತಾರೀಖು 8ನೇ ಶುಕ್ರವಾರ ಹಗಲು 11 ಘಂಟೆಗೆ ಕಡೂರು ಡಿಸ್ಟ್ರಿಕ್ಟ್ ಕಮ್ಮಿಷನರ್ ಸಾಹೇಬರವರ ಮುಂಜೂರಾತಿಗೆ ಬಳಪಡಿಸಿ ಕೊಪ್ಪ ತಾಲ್ಲೂಕು ಅಮಲ್ದಾರ್ರ ರೂಬರೂ ಹರಿಹರಪುರ ಮೊಕ್ಕಾಮಿನಲ್ಲಿ ಬಹಿರಂಗವಾದ ಹರಾಜು ಮೂಲಕ ಅವುಗಳು ವಿಕ್ರಯಿಸಲ್ಪಡುವವು.

2. ಪೂಮೂಲ್ ಷರತ್ತುಗಳಿಗೆ ಬಳಪಟ್ಟು ಬಹಿರಂಗವಾದ ಹರಾಜು ಮೂಲಕ ಸದರೀ ಲೀಲಾವ್ ನಡಿಯತಕ್ಕದ್ದು ಎಕರೆ 1ಕ್ಕೆ 10 ರೂಪಾಯಿಗಳ ಮೇರೆ ಆಗುವ ಅಪ್ಸೆಟ್‌ಪ್ರೈಸ್ ಯಾನೆ ನಿಯಮವಾದ ಸರ್ಕಾರದ ಸವಾಲಿಗೆ ಮೇಲ್ಪಟ್ಟು ಖರೀದಿ ಮಾಡುವ ಆಕ್ಟೋಬರ್ ಫದರಖಾಸ್ತುದಾರನಿಗೆ ಮೂರು ವಾರಗಳಿಂದ ಜಮೀನ್ ಹರಾಜನ್ನು ಖೈದ್ ಮಾಡೋಣಾಗುತ್ತದೆ. ಹರಾಜಿನಲ್ಲಿ ಆ ಜಮೀನ್ ದರಖಾಸ್ತುದಾರನಿಗೆ ಆಗುವ ಪಕ್ಷದಲ್ಲಿ ಆತನಿಂದ ಹಾಜರಾಗಿರುವ ನಿಯಮವಾದ ಸರ್ಕಾರದ ಸವಾಲ್ ಮೊಬಲಗು (ಅಪ್ಸೆಟ್‌ಪ್ರೈಸ್) ಖೈಕಿ ಯಾ ಜವಥಾ ಹಿಸ್ಸೇ ಡಿಪಾಜಿಟ್ ಮೊಬಲಗನ್ನು ಹರಾಜು ಮೊಬಲಗಿನ ಮೇಲೆ ಶೇಕಡಾ 25 ರೂಪಾಯಿಗಳ ಮೇರೆ ಆಗುವ ಡಿಪಾಜಿಟ್ ಮೊಬಲಗು ಭರ್ತಿಗೆ ಜಮಾ ಹಿಡಿಯೋಣಾಗುತ್ತೆ. ಆದರೆ ಆ ಜಮೀನನ್ನು ಹರಾಜಿನಲ್ಲಿ ದರಖಾಸ್ತು ಮಾನಲ್ಲದ ಇತರರ್ಯಾರಾದರೂ ಪಡೆದರೆ ದರಖಾಸ್ತುದಾರನ ಷುರೂ ತೇವಣಿ ಮೊಬಲಗನ್ನು ವಾಪಸು ಮಾಡೋಣಾಗುತ್ತದೆ.